**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ ರವರ ನ್ಯಾಯಾಲಯ, ಕೊಳ್ಳೇಗಾಲ.**

**ಸಿಸಿ ನಂ. 277/2018**

| | | |
|---|---|---|
| ಸಾಕ್ಷಿಯ ಹೆಸರು | : ಮಾದಶೆಟ್ಟಿ | |
| ತಂದೆಯ ಹೆಸರು | : ಮಹಾದೇವಶೆಟ್ಟಿ | |
| ವಯಸ್ಸು | : 47 ವರ್ಷ | |
| ಉದ್ಯೋಗ | : ಕೂಲಿ ಕೆಲಸ | ಚಾಸಾ – 12 |
| ವಾಸ ಸ್ಥಳ | : ಕುಣಗಳ್ಳಿ | ಫ್ರಾಸಾ – 13 |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾದ ದಿನಾಂಕಃ** 11.08.2026

**ಮುಖ್ಯ ವಿಚಾರಣೆ – ಮಾನ್ಯ ಸ.ಸ.ಅ. ರವರಿಂದ**

ಚಾಸಾ 11 ರವರು ಗೊತ್ತು. ಅಮಾನತ್ತು ಮಹಜರಿನಲ್ಲಿರುವ ಸಹಿ ನನ್ನದೇ. ಅಮಾನತ್ತು ಮಹಜರನ್ನು ಈಗಗಲೇ ನಿಪಿ–5 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ–5(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 9 ವರ್ಷಗಳ ಹಿಂದೆ ಪೋಲಿಸ್ ಠಾಣೆಯಲ್ಲಿ ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ಸಮಯದಲ್ಲಿ ಒಬ್ಬ ವ್ಯಕ್ತಿಯು ಪೋಲಿಸರ ಮುಂದೆ 500/– ರೂ ಮುಖಬೆಲೆಯುಳ್ಳ ಸುಮಾರು 50 ನೋಟುಗಳನ್ನು ಪೋಲಿಸರಿಗೆ ನೀಡಿದ್ದು ಸದರಿ ಮೊತ್ತವನ್ನು ನಮ್ಮಗಳ ಸಮಕ್ಷಮ ಪೋಲಿಸ್ ವಶಕ್ಕೆ ಪಡೆಯುವಾಗ ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆ. ಆ ಸಂದರ್ಭದಲ್ಲಿ ಪೋಟೋಗಳನ್ನು ಸಹ ತೆಗೆದಿರುತ್ತಾರೆ. ಸದರಿ ಪೋಟೋಗಳನ್ನು ಈಗಾಗಲೇ ನಿಪಿ–6 ರಿಂದ ನಿಪಿ–13 ಎಂದು ಗುರುತಿಸಿರುತ್ತಾರೆ. ಸಾಕ್ಷಿಯು ನಿಪಿ–6 ರಿಂದ ನಿಪಿ–13 ರ ಪೋಟೋಗಳನ್ನು ನೋಡಿ ಗುರುತಿಸಿರುತ್ತಾರೆ. ಆಗ ಸಮಯ ಸುಮಾರು ಮಧ್ಯಾಹ್ನ 3–4 ಗಂಟೆ ಆಗಿರುತ್ತದೆ. ಸದರಿ 500/– ರೂ. ಮುಖಬೆಲೆಯುಳ್ಳ ನೋಟುಗಳನ್ನು ನೋಡಿದರೆ ಗುರುತಿಸುತ್ತೇನೆ. 3 ನೇ ಆರೋಪಿ ಈ ದಿನ ಗೈರು ಹಾಜರಾಗಿದ್ದು , 3 ನೇ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಹಃ ಸಾಕ್ಷಿಯನ್ನಾಗಿ ಪರಿಗಣಿಸಿ ಮಾನ್ಯ ಸ.ಸ.ಅ.ರವರ ಕೋರಿಕೆಯ ಮೇರೆಗೆ ಪಾಟೀ ಸವಾಲಿಗೆ ಅನುಮತಿಸಲಾಯಿತು.)

**ಪಾಟೀ ಸವಾಲು – ಮಾನ್ಯ ಸ.ಸ.ಅ. ರವರಿಂದ**

ದಿನಾಂಕ 23.06.2018 ರಲ್ಲಿ ಸದರಿ ಮಹಜರಿಗೆ ಸಹಿ ಮಾಡಿರುತ್ತೇನೆ ಎಂದರೆ ನಾನು ದಿನಾಂಕ ಮರೆತಿರುತ್ತೇನೆ ಎಂದು ಹೇಳುತ್ತಾರೆ. ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲಿಸರು ಸದರಿ 25,000/– ಹಣವನ್ನು 3 ನೇ ಆರೋಪಿಯಿಂದ ತನಿಖೆ ಸಂಬಂಧ ವಶಪಡಿಸಿಕೊಳ್ಳುವ ಕಾಲಕ್ಕೆ ಪೋಲಿಸರು ಕೇಸಿನ ವಿಷಯ ತಿಳಿಸಿ ಸಹಿ ಮಾಡಿಸಿಕೊಂಡಿರುತ್ತಾರೆ ಎಂದರೆ ಸರಿ.

3 ನೇ ಆರೋಪಿಯ ಪರ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಲಾಯಿತು. )

ಓ ಹೇ ಕೇ ಸಾ ಸ ಇ ಒ

(ಸುನೀತ)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ ದಂ. ಕೊಳ್ಳೇಗಾಲ.